# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1184

ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ

ಉತ್ತರಿಸುವವರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ಉತ್ತರಿಸಬೇಕಾದ ದಿನಾಂಕ : 20.12.2018

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 2012ರಲ್ಲಿ ಸಮಗ್ರ ಮಕ್ಕಳ ಅಭಿವೃದ್ಧಿ ಯೋಜನೆ (Restructured ICDS) ಜಾರಿಯಲ್ಲಿದ್ದು, ಇದರಲ್ಲಿ ಮುಖ್ಯ ಬದಲಾವಣೆಗಳನ್ನು ತರುವ ಆಲೋಚನೆ ಸರ್ಕಾರಕ್ಕೆ ಇದೆಯೇ; | ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. |
| ಆ) | ರಾಜ್ಯದಲ್ಲಿ ಪುನರ್ ಸಂಘಟಿತ ಮಾದರಿಯಲ್ಲಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಜಾರಿಯಲ್ಲಿದೆಯೇ? | ಹೌದು<br>ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಸರ್ಕಾರದ ಯೋಜನೆಯಾಗಿರುತ್ತದೆ.<br>ಕೇಂದ್ರ ಸರ್ಕಾರವು ಪತ್ರ ಸಂಖ್ಯೆ 11-36/2016_ಸಿಡಿ-1 ದಿನಾಂಕ: 23-11-2017ರಲ್ಲಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು "ಅಂಗನವಾಡಿ ಸೇವೆಗಳು" ಎಂದು ಪುನರ್ ನಾಮಕರಣ ಮಾಡಿರುತ್ತದೆ. |
| ಇ) | ಈ ಪುನರ್ ಸಂಘಟಿತ ಮಾದರಿಯ ಜಾರಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಬಾಲವಿಕಾಸ ಸಮಿತಿ (BVS) ಯನ್ನು ಯಾವ ರೀತಿ ತೊಡಗಿಸಿಕೊಳ್ಳಲಾಗಿದೆ. | ರಾಜ್ಯ ಸರ್ಕಾರವು ಬಾಲವಿಕಾಸ ಸಮಿತಿಯನ್ನು 22.01.2018 ರಲ್ಲಿ ಪುನರ್ ರಚಿಸಿರುತ್ತದೆ. ಈ ಬಾಲವಿಕಾಸ ಸಮಿತಿಯಲ್ಲಿ ಫಲಾನುಭವಿಯ ಒಂದು ಮಗುವಿನ ತಾಯಿಯನ್ನು ಅಧ್ಯಕ್ಷರನ್ನಾಗಿ ಮಾಡಲಾಗಿದೆ.<br>ಬಾಲವಿಕಾಸ ಸಮಿತಿಯ ಸಭೆಯನ್ನು ಪ್ರತಿ ತಿಂಗಳ 3ನೇ ಶನಿವಾರ ನಡೆಸಲು ಸೂಚನೆ ನೀಡಲಾಗಿರುತ್ತದೆ. ಬಾಲವಿಕಾಸ ಸಮಿತಿಯ ಸದಸ್ಯರುಗಳಿಗೆ ತರಬೇತಿಯನ್ನು ನೀಡಲಾಗಿರುತ್ತದೆ. ಈ ಸಭೆಯಲ್ಲಿ ಅಂಗನವಾಡಿ ಕೇಂದ್ರಗಳಿಗೆ ಬೇಕಾಗುವ ಮೂಲಭೂತ ಸೌಲಭ್ಯಗಳ ಬಗ್ಗೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುತ್ತಿದೆ. |
| ಈ) | ಇದರ ಜಾರಿಯ ಪರಿಣಾಮ ಮತ್ತು ಫಲಿತಾಂಶವೇನು; | ಬಾಲವಿಕಾಸ ಸಮಿತಿಯ ಜಾರಿಯಿಂದ ಸಮುದಾಯವು ಅಂಗನವಾಡಿ ಕೇಂದ್ರಗಳ ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಮಾಡಲು ಸಾಧ್ಯವಾಗುತ್ತದೆ ಹಾಗೂ ಅಂಗನವಾಡಿ ಕೇಂದ್ರಗಳ ನಿರ್ವಹಣೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಸಹಾಯಕವಾಗುತ್ತದೆ. |
| ಉ) | ನಿರೀಕ್ಷಿತ ಫಲಿತಾಂಶ ಬಂದಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು? (ವಿವರ ನೀಡುವುದು). | ಬಾಲವಿಕಾಸ ಸಮಿತಿಯನ್ನು ಇತ್ತೀಚೆಗೆ ಪುನರ್ ರಚಿಸಲಾಗಿದ್ದು, ಈ ಸಮಿತಿಯಿಂದ ಉತ್ತಮ ಫಲಿತಾಂಶವನ್ನು ನಿರೀಕ್ಷಿಸಲಾಗಿದೆ. |

ಸಂ:ಮಮಇ 359 ಐಸಿಡಿ 2018

(ಡಾ. ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.